ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

## ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು

ವಿಷಯ: ಶ್ರೀ ಕೆ.ಆರ್. ರಾಘವ, ದ್ವಿತೀಯ ದರ್ಜೆ ಸಹಾಯಕರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ ಇವರಿಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಪೂರ್ವಾನ್ವಯವಾಗಿ ಮುಂಬಡ್ತಿ ನೀಡುವ ಕುರಿತು .

ಉಲ್ಲೇಖ:
1. ದಿನಾಂಕ: 27.11.2012 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
2. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
3. ಈ ಕಛೇರಿ ಜ್ಞಾಪನ ಸಂಖ್ಯೆ: DTE-ADMIOEST(4)/18/2021, ದಿನಾಂಕ: 27.12.2021

*****

ಪ್ರಸ್ತಾವನೆ:

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿದ್ದ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಅರ್ಹ ದ್ವಿತೀಯ ದರ್ಜೆ ಸಹಾಯಕ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡುವ ಸಂಬಂಧ ದಿನಾಂಕ: 27.11.2012 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಶ್ರೀ ಕೆ.ಆರ್. ರಾಘವ ಇವರ ಮೇಲೆ ಕ್ರಿಮಿನಲ್ ಕೇಸ್ ಹಾಸನದ ನ್ಯಾಯಾಲಯದಲ್ಲಿ ಬಾಕಿ ಇದ್ದ ಕಾರಣ ಮುಂಬಡ್ತಿಯನ್ನು ಮೊಹರು ಮಾಡಿದ ಲಕೋಟೆಯಲ್ಲಿಡಲು ಸಮಿತಿಯು ತೀರ್ಮಾನಿಸಲಾಗಿತ್ತು.

ಸರ್ಕಾರದ ಆದೇಶ ಸಂಖ್ಯೆ: ಇಡಿ 133 ಟಿಜಿಎಲ್ 2016, ದಿನಾಂಕ: 17.01.2019 ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ ಇಲ್ಲಿನ ಕಳ್ಳತನಕ್ಕೆ ಸಂಬಂಧಿಸಿದಂತೆ ಇಲಾಖಾ ಪೂರ್ವಭಾವಿ ವಿಚಾರಣೆಯ ಪ್ರಾಥಮಿಕ ತನಿಖಾ ವರದಿಯಂತೆ, ಕ.ನಾ.ಸೇ.(ಸಿಸಿಎ) ನಿಯಮಗಳು, 1957 ರ ನಿಯಮ 13 ನ್ನು ಓದಿಕೊಂಡಂತೆ ನಿಯಮ 11 ರಡಿ ಕಾರಣ ಕೇಳುವ ನೋಟಿಸ್ ಅನ್ನು ಕೆ.ಆರ್. ರಾಘವ ಮತ್ತಿತರರುಗಳಿಗೆ ಜಾರಿ ಮಾಡಲಾಗಿತ್ತು. ನಂತರ ಸರ್ಕಾರದ ದಿನಾಂಕ: 19.03.2020 ರ ಆದೇಶದಲ್ಲಿ ಮಾಡಿರುವ ಆರೋಪಗಳಿಂದ ದೋಷಮುಕ್ತರನ್ನಾಗಿ ಆದೇಶಿಸಲಾಗಿರುತ್ತದೆ.

ಶ್ರೀ ಕೆ.ಆರ್. ರಾಘವ, ದ್ವಿತೀಯ ದರ್ಜೆ ಸಹಾಯಕರು ಇವರ ವಿರುದ್ಧ ಬಾಕಿಯಿದ್ದ ಕ್ರಿಮಿನಲ್ ಪ್ರಕರಣದಲ್ಲಿ ಸದರಿಯವರು ದೋಷಮುಕ್ತ ಹೊಂದಿರುವುದರಿಂದ ದ್ವಿತೀಯ ದರ್ಜೆ ಸಹಾಯಕರ ವೃಂದದಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ ಮುಂಬಡ್ತಿ ನೀಡುವ ಸಂಬಂಧ ದಿನಾಂಕ: 27.11.2012 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಮುಚ್ಚಿದ ಲಕೋಟೆಯಲ್ಲಿಟ್ಟಿರುವ ಮುಂಬಡ್ತಿಯನ್ನು ತೆರೆದು, ಕರ್ನಾಟಕ ಸಿವಿಲ್ ಸೇವೆಗಳು (ಬಡ್ತಿ, ವೇತಮ ಮತ್ತು ಪಿಂಚಣಿಗಳ ಕ್ರಮಬದ್ಧತೆ) ನಿಯಮಗಳು, 1978 ರ ನಿಯಮ 2(1)(ಎ) ರನ್ವಯ ಸದರಿಯವರಿಗಿಂತ ಜೇಷ್ಠತೆಯಲ್ಲಿ ಕಿರಿಯರಾದ ಶ್ರೀ ಹೆಚ್.ಕೆ. ನಾರಾಯಣಸ್ವಾಮಿ ಇವರು ಪ್ರಥಮ ದರ್ಜೆ ಸಹಾಯಕರ ಮುಂಬಡ್ತಿ ಹುದ್ದೆಯಲ್ಲಿ ಕಾರ್ಯವರದಿ ಮಾಡಿಕೊಂಡ ದಿನಾಂಕ: 28.11.2012 ರಿಂದ ಅನ್ವಯಿಸುವಂತೆ ಶ್ರೀ ಕೆ.ಆರ್. ರಾಘವ ಇವರಿಗೆ ಪೂರ್ವಾನ್ವವವಾಗಿ ಪ್ರಥಮ ದರ್ಜೆ ಸಹಾಯಕರ ಹುದ್ದೆಯ ಮುಂಬಡ್ತಿಗೆ ಪರಿಗಣಿಸಲು ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಸದರಿಯವರಿಗೆ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಪೂರ್ವಾನ್ವಯ ಬಡ್ತಿ ನೀಡುವ ಸಂಬಂಧ ಸ್ಥಳ ಸೂಚಿಸಲು ಉಲ್ಲೇಖ (3) ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ಸದರಿಯವರಿಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಪೂರ್ವಾನ್ವಯವಾಗಿ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: DTE-ADMIOEST(5)/36/2020, ದಿನಾಂಕ: 31.12.2021**

ಶ್ರೀ ಕೆ.ಆರ್. ರಾಘವ, ದ್ವಿತೀಯ ದರ್ಜೆ ಸಹಾಯಕರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ ಇವರಿಗೆ ಗ್ರೂಪ್-ಸಿ ವೃಂದದ ರಾಜ್ಯ ವೇತನ ಶ್ರೇಣಿ ರೂ. 27650-650-29600-750-32600-850-36000-950-39800-1100-46400-1250-52650 ರಲ್ಲಿನ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ದಿನಾಂಕ: 28.11.2012 ರಿಂದ ಪೂರ್ವಾನ್ವಯವಾಗಿ ಅನ್ವಯಿಸುವಂತೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ ಇಲ್ಲಿನ ಖಾಲಿ ಹುದ್ದೆಗೆ ಎದುರಾಗಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

1. ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ(ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ);
2. ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ.(ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ);
3. ಶ್ರೀ ಕೆ.ಆರ್. ರಾಘವ, ದ್ವಿತೀಯ ದರ್ಜೆ ಸಹಾಯಕರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ(ಪ್ರಾಂಶುಪಾಲರ ಮೂಲಕ);
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಶಾಖಾ ರಕ್ಷಾ ಕಡತ.